ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಸರ್ಕಾರದ ಡಯಾಲಿಸಿಸ್ ಸೆಂಟರ್‌ಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

932 (1209) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019-20ನೇ ಸಾಲಿನ ಅಂತ್ಯದವರೆಗೆ ರಾಜ್ಯದಲ್ಲಿ ಸರ್ಕಾರಿ ಜನರಲ್ ಆಸ್ಪತ್ರೆಗಳಲ್ಲಿ ಪ್ರಾರಂಭಿಸಲಾಗಿರುವ ಡಯಾಲಿಸಿಸ್ ಕೇಂದ್ರಗಳು ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) 2019-20ನೇ ಸಾಲಿನ ಅಂತ್ಯದವರೆಗೆ ಮಂಡ್ಯ ಜಿಲ್ಲೆಯ ಜನರಲ್ ಆಸ್ಪತ್ರೆಗಳಲ್ಲಿ ಎಷ್ಟು ಜನ ಡಯಾಲಿಸಿಸ್ ಚಿಕಿತ್ಸೆ ಪಡೆದಿರುತ್ತಾರೆ ; (ತಾಲ್ಲೂಕುವಾರು ಮತ್ತು ಆಸ್ಪತ್ರೆಗಳವಾರು ಮಾಹಿತಿ ನೀಡುವುದು)

(ಇ) ಸರ್ಕಾರದ ಡಯಾಲಿಸಿಸ್ ಸೆಂಟರ್‌ಗಳನ್ನು ನಿರ್ವಹಿಸುತ್ತಿರುವ ಸರ್ಕಾರಿ/ಸರ್ಕಾರೇತರ ಸಂಸ್ಥೆಗಳು ಯಾವುವು ; ಸರ್ಕಾರೇತರ ಸಂಸ್ಥೆಗಳೊಂದಿಗೆ ಮಾಡಿಕೊಂಡಿರುವ ಒಪ್ಪಂದಗಳ ಮುಖ್ಯಾಂಶಗಳೇನು ;

(ಈ) ಹಲವಾರು ಡಯಾಲಿಸಿಸ್ ಕೇಂದ್ರಗಳಲ್ಲಿ ಟೆಕ್ನೀಶಿಯನ್‌ಗಳ ಕೊರತೆ ಮತ್ತು ಡಯಾಲಿಸಿಸ್ ಮೆಷಿನ್‌ಗಳು ಪದೇ ಪದೇ ಕೆಟ್ಟು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;ಹಾಗಿದ್ದಲ್ಲಿ, ಈ ಪರಿಸ್ಥಿತಿಯನ್ನು ಸುಧಾರಿಸಲು ಕೈಗೊಂಡಿರುವ ಕ್ರಮಗಳೇನು?